ಕರ್ನಾಟಕ ವಿಧಾನ ಸಭೆ

ಬುಧವಾರ 8ನೇ ಫೆಬ್ರುವರಿ 2006 ರಂದು

ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ 10 ಗಂಟೆ 34 ನಿಮಿಷಕ್ಕೆ ಸಮಾವೇಶಗೊಂಡಿತು

ಅಧ್ಯಕ್ಷರು (ಶ್ರೀ ಕೃಷ್ಣರವರು)

ಅಧ್ಯಕ್ಷ ಪೀಠವನ್ನು ಅಲಂಕರಿಸಿದರು.

1) ಪ್ರಕಟಣೆ

ವಿಷಯ :- ಶ್ರೀ ಎಸ್. ಧರ್ಮಸಿಂಗ್ ಅವರನ್ನು ಪ್ರತಿಪಕ್ಷದ ನಾಯಕರನ್ನಾಗಿ ಮಾನ್ಯತೆ ಮಾಡುವ ಬಗ್ಗೆ.

ಸಭಾಧ್ಯಕ್ಷರು : ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ ಅವರು ದಿನಾಂಕ 07-02-2006ರಂದು ಪತ್ರವನ್ನು ನೀಡಿ ವಿಧಾನ ಸಭೆಯ ಮಾನ್ಯ ಸದಸ್ಯರಾದ ಶ್ರೀ ಎಸ್. ಧರ್ಮಸಿಂಗ್ ಅವರನ್ನು ವಿಧಾನ ಸಭೆಯ ಪ್ರತಿಪಕ್ಷದ ನಾಯಕರನ್ನಾಗಿ ಮಾನ್ಯತೆ ನೀಡುವಂತೆ ಕೋರಿರುತ್ತಾರೆ.

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 2(2) ರ ಪ್ರಕಾರ ವಿಧಾನ ಸಭೆಯ ಸದಸ್ಯರಾದ ಶ್ರೀ ಎಸ್. ಧರ್ಮಸಿಂಗ್ ಅವರನ್ನು ವಿಧಾನಸಭೆಯಲ್ಲಿ ವಿರೋಧ ಪಕ್ಷದ ನಾಯಕರೆಂದು ಮಾನ್ಯತೆ ನೀಡಲಾಗಿದೆ.

2) ವಿಶ್ವಾಸಮತ ಕೋರುವ ಪ್ರಸ್ತಾವ

ವಿಷಯ: "ಈ ಸದನವು ಶ್ರೀ ಹೆಚ್.ಡಿ. ಕುಮಾರಸ್ವಾಮಿ ಅವರ ನೇತೃತ್ವದ ಸಚಿವ ಸಂಪುಟದಲ್ಲಿ ವಿಶ್ವಾಸವನ್ನು ವ್ಯಕ್ತಪಡಿಸುತ್ತದೆ."

ಅಧ್ಯಕ್ಷರು : ಮಾನ್ಯ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು) ಅವರು ಪ್ರಸ್ತಾವವನ್ನು ಮಂಡಿಸುವುದು.

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು) : ಸನ್ಮಾನ್ಯ ಅಧ್ಯಕ್ಷರೆ, ಈ ಕೆಳಕಂಡ ಪ್ರಸ್ತಾವವನ್ನು ಮಂಡಿಸುತ್ತೇನೆ.

" ಈ ಸದನವು ಶ್ರೀ ಹೆಚ್.ಡಿ. ಕುಮಾರಸ್ವಾಮಿ ಅವರ ನೇತೃತ್ವದ ಸಚಿವ ಸಂಪುಟದಲ್ಲಿ ವಿಶ್ವಾಸವನ್ನು ವ್ಯಕ್ತಪಡಿಸುತ್ತದೆ."

(ಪ್ರಸ್ತಾವ ಮಂಡಿಸಲ್ಪಟ್ಟಿತು)

ಅಧ್ಯಕ್ಷರು : ಪ್ರಸ್ತಾವವನ್ನು ಮಂಡಿಸಲಾಗಿದೆ.

ಈಗ ಚರ್ಚೆಗೆ ಮುಂಚೆ ನಾನು ಸಾಯಂಕಾಲ 6 ಗಂಟೆಯವರೆಗೆ ಸಭೆಯನ್ನು ನಡೆಸಬೇಕೆಂದು ತೀರ್ಮಾನವನ್ನು ತೆಗೆದುಕೊಂಡಿದ್ದೇನೆ. ಇದರಲ್ಲಿ ಪಕ್ಷದ ಸದಸ್ಯರ ಸಂಖ್ಯೆಯ